ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಕೃಷಿ ಸಂಸ್ಕರಣ ಯೋಜನೆಯ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

193 (321) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ, ಮೈಸೂರು, ಚಾಮರಾಜನಗ ರ ಮತ್ತು ಹಾಸನ ಜಿಲ್ಲೆಗಳಲ್ಲಿನ ಸಣ್ಣ ಮತ್ತು ಅತಿ ಸಣ್ಣ ಹಾಗೂ ಎಸ್.ಟಿ.ಪಿ ಮತ್ತು ಟಿ.ಎಸ್.ಪಿ ರೈತರ ಸಂಖ್ಯೆ ಎಷ್ಟು ;

(ಆ) ಸದರಿಯವರಿಗೆ ಕೃಷಿ ಸಂಸ್ಕರಣ ಯೋಜನೆಯಲ್ಲಿ ಪ್ರಸಕ್ತ ಸಾಲಿನಲ್ಲಿ ನಿಗಧಿಪಡಿಸಿರುವ ಟಾರ್ಪಲ್‌ಗಳ ಸಂಖ್ಯೆ ಎಷ್ಟು ;

(ಇ) ಇದುವರೆವಿಗೂ ಫಲಾನುಭವಿಗಳಿಗೆ ವಿತರಿಸಲಾಗಿರುವ ಟಾರ್ಪಲ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಟಾರ್ಪಲ್‌ಗಳನ್ನು ಒದಗಿಸಲಾಗುವುದು;

(ಉ) ನಿಯಮ ಪಾಲನೆ ಮಾಡದೆ ಹಣ ಹಂಚಿಕೆ ಮಾಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?